ಕಂಪ್ಯೂಟರ್

ನಿ-72-ಕ್ರ-101

ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ರವಿ ಇವರ ನಿಯಮ 72ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ ಸಲ್ಲಿಸುವ ಬಗ್ಗೆ

## ವಿಷಯ

ರಾಜ್ಯದಲ್ಲಿ ಹಿರಿಯ ನಾಗರಿಕರ ಮೇಲೆ ನಡೆಯುತ್ತಿರುವ ದೌರ್ಜನ್ಯ ಹಾಗೂ ಕಿರುಕುಳ ಪ್ರಕರಣಗಳು ವರ್ಷದಿಂದ ವರ್ಷಕ್ಕೆ ಹೆಚ್ಚಳವಾಗುತ್ತಿದ್ದು, ಇಳಿವಯಸ್ಸಿನಲ್ಲಿ ನೆಮ್ಮದಿಯಿಂದ ಜೀವನ ನಡೆಸಲು ಸಾಧ್ಯವಾಗದೇ ಸಾವಿರಾರು ಹಿರಿಯ ನಾಗರಿಕರು ಜಿಲ್ಲಾ ಸಹಾಯವಾಣಿಗಳಿಗೆ ದಿನನಿತ್ಯ ಕರೆ ಮಾಡುತ್ತಿದ್ದಾರೆ. ಮೇ 2021 ರಿಂದ ಮೇ 2022ರವರೆಗೆ ರಾಜ್ಯದಾದ್ಯಂತ ಸುಮಾರು 55 ಸಾವಿರ ಕರೆಗಳು ಬಂದಿದ್ದು, ಕಳೆದ 20 ವರ್ಷಗಳಲ್ಲಿ ಸಹಾಯ ಕೋರಿ 2.35 ಲಕ್ಷ ಹಿರಿಯ ನಾಗರಿಕರು ಸಹಾಯವಾಣಿಯನ್ನು ಸಂಪರ್ಕಿಸಿರುವುದಾಗಿ ದಿನಪತ್ರಿಕೆಯಲ್ಲಿ ವರದಿಯಾಗಿರುವುದು ಕಳವಳಕಾರಿಯಾದ ಸಂಗತಿಯಾಗಿದೆ. ದೌರ್ಜನ್ಯಕ್ಕೆ ತುತ್ತಾಗಿಯೂ ಮಾರ್ಯಾದೆಗೆ ಅಂಜಿ ದೂರು ನೀಡದ ಪ್ರಕರಣಗಳು ಬಹಳಷ್ಟಿವೆ. ಈ ವಿಷಯವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿ ಹಿರಿಯ ನಾಗರಿಕರು ತಮ್ಮ ಇಳಿವಯಸ್ಸಿನಲ್ಲಿ ನೆಮ್ಮದಿಯಿಂದ ಜೀವನ ನಡೆಸಲು ಸಾಧ್ಯವಾಗುವಂತಹ ಸುರಕ್ಷತೆಯನ್ನು ನಿರ್ಮಾಣ ಮಾಡಲು ಕಠಿಣ ಕ್ರಮಗಳನ್ನು ಕೈಗೊಳ್ಳುವಂತೆ ಗಣಿ ಮತ್ತು ಭೂವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಗಮನ ಸೆಳೆಯಲು ಅನುಮತಿ ನೀಡುವಂತೆ ಕೋರುತ್ತೇನೆ.

## ಉತ್ತರ

ರಾಜ್ಯದಲ್ಲಿ ಹಿರಿಯ ನಾಗರಿಕರ ಮೇಲೆ ನಡೆಯುತ್ತಿರುವ ದೌರ್ಜನ್ಯ ಹಾಗೂ ಕಿರುಕುಳ ಪ್ರಕರಣಗಳು ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಿರುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳು ಈ ಕೆಳಕಂಡಂತಿದೆ.

1. ದೌರ್ಜನ್ಯ, ಶೋಷಣೆ, ವಂಚನೆಗೊಳಗಾದ ಹಾಗೂ ನಿರ್ವಹಣಾ ವೆಚ್ಚದ ಅಗತ್ಯವಿರುವ ಹಿರಿಯ ನಾಗರಿಕರು ನ್ಯಾಯಕ್ಕಾಗಿ ಈ ಅಧಿನಿಯಮದ ಪರಿಚ್ಛೇದ 5(4)ರಲ್ಲಿ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿತವಾದ ನಿರ್ವಹಣಾ ನ್ಯಾಯಮಂಡಳಿಯಲ್ಲಿ ವ್ಯಾಜ್ಯಗಳನ್ನು ಹೂಡಬಹುದಾಗಿದ್ದು, ಅರ್ಜಿ ಸಲ್ಲಿಸಿದ 90 ದಿನಗಳ ಒಳಗಾಗಿ ನ್ಯಾಯ ಪಡೆಯಬಹುದಾಗಿರುತ್ತದೆ.
2. ಅಸಾಧಾರಣ ಸಂದರ್ಭಗಳಲ್ಲಿ ನಿರ್ವಹಣಾ ನ್ಯಾಯಮಂಡಳಿಯು ಲಿಖಿತವಾಗಿ ದಾಖಲಿಸಿ, ಒಂದು ಭಾರಿ ಗರಿಷ್ಠ 30 ದಿನಗಳಿಗೆ ಈ ಅವಧಿಯನ್ನು ವಿಸ್ತರಿಸಬಹುದಾಗಿದೆ.
3. ನಿರ್ವಹಣಾ ನ್ಯಾಯ ಮಂಡಳಿಯ ತೀರ್ಪಿನ ವಿರುದ್ಧ ಹಿರಿಯ ನಾಗರಿಕರು 60 ದಿನಗಳ ಒಳಗಾಗಿ ಮೇಲ್ಮನವಿ ನ್ಯಾಯ ಮಂಡಳಿಯಲ್ಲಿ ಅಪೀಲನ್ನು ಸಲ್ಲಿಸಬಹುದಾಗಿದೆ.
4. ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿತವಾದ ಮೇಲ್ಮನವಿ ನ್ಯಾಯಮಂಡಳಿಯು ಅಪೀಲು ಸ್ವೀಕರಿಸಿದ 30 ದಿನಗಳ ಒಳಗಾಗಿ ವ್ಯಾಜ್ಯವನ್ನು ಪೂರ್ಣಗೊಳಿಸಬೇಕೆಂಬ ನಿಯಮವಿರುತ್ತದೆ.
5. ಪೋಷಕರನ್ನು ನಿರ್ಲಕ್ಷಿಸುವ ಮಕ್ಕಳಿಗೆ/ಕಿರಿಯರಿಗೆ ಅಥವಾ ಪೋಷಕರಿಗೆ ವಿಧಿಸುವ ದಂಡ/ಶಿಕ್ಷೆಯು ಹಿರಿಯ ನಾಗರಿಕರ ನಿರ್ವಹಣೆ ಮತ್ತು ರಕ್ಷಣಾ ಕಾಯ್ದೆ 2007ರಲ್ಲಿ, ಮಕ್ಕಳು

ಪೋಷಕರನ್ನು ತ್ಯಜಿಸುವ ಪ್ರವೃತ್ತಿಯನ್ನು ತಡೆಗಟ್ಟಲು, ಇಂತಹ ಮಕ್ಕಳಿಗೆ/ಪೋಷಕರಿಗೆ ವಿಚಾರಣೆ ನಂತರ 3 ತಿಂಗಳ ಜೈಲು ವಾಸ, ಮತ್ತು ರೂ.5000/- ದಂಡ ಅಥವಾ ಎರಡೂ ವಿಧಿಸಲು ಅವಕಾಶವಿದೆ.

6. ಪ್ರತಿಯೊಂದು ಪೊಲೀಸ್ ಠಾಣೆಯು ತಮ್ಮ ಅಧಿಕಾರ ಕ್ಷೇತ್ರ ವ್ಯಾಪ್ತಿಯೊಳಗೆ ವಾಸಿಸುತ್ತಿರುವ ಹಿರಿಯ ನಾಗರಿಕರ ಬಗ್ಗೆ ಅದರಲ್ಲೂ ಒಂಟಿಯಾಗಿ ವಾಸವಾಗಿರುವ ಹಿರಿಯ ನಾಗರಿಕರ ಬಗ್ಗೆ ಒಂದು ಪರಿಷ್ಕೃತ ಪಟ್ಟಿಯನ್ನು ನಿರ್ವಹಿಸತಕ್ಕದ್ದು ಎಂದು ತಂದೆ ತಾಯಿಯರ ಮತ್ತು ಹಿರಿಯ ನಾಗರಿಕರ ಪಾಲನೆ-ಪೋಷಣೆ ಮತ್ತು ಕಲ್ಯಾಣ ನಿಯಮಾವಳಿ-2009ರಲ್ಲಿ ತಿಳಿಸಲಾಗಿರುತ್ತದೆ
7. ಹಿರಿಯ ನಾಗರಿಕರ ರಕ್ಷಣಾ ಕಾಯ್ದೆ ಹಾಗೂ ನಿಯಮಾವಳಿಗಳನ್ವಯ ಹಿರಿಯ ನಾಗರಿಕರ ಆಸ್ತಿ ಹಾಗೂ ಜೀವ ರಕ್ಷಣೆಗೆ ಸಂಬಂಧಿಸಿದಂತೆ ಪೊಲೀಸ್ ಇಲಾಖೆಯ ಸಮನ್ವಯತೆಯೊಂದಿಗೆ ಕಾರ್ಯನಿರ್ವಹಿಸಲು ತಿಳಿಸಲಾಗಿರುತ್ತದೆ. ಪ್ರಯುಕ್ತ ನಿರ್ವಹಣಾ ನ್ಯಾಯಮಂಡಳಿಯಲ್ಲಿ ಪರವಾಗಿ ತೀರ್ಪು ಪಡೆದ ಹಿರಿಯ ನಾಗರಿಕರು, ತೀರ್ಪಿನನ್ವಯ ಆಸ್ತಿ/ಮನೆಗಳನ್ನು ಪಡೆಯಲು ಸಾಧ್ಯವಾಗದ ಸಂದರ್ಭಗಳಲ್ಲಿ ಪೊಲೀಸ್ ಇಲಾಖೆಯು ಅವರ ಆಸ್ತಿ/ಮನೆಗಳನ್ನು ಕೊಡಿಸಿಕೊಡುವ ಜವಾಬ್ದಾರಿಯನ್ನು ವಹಿಸಿಕೊಂಡು ನ್ಯಾಯಮಂಡಳಿಯ ಆದೇಶವನ್ನು ಪಾಲಿಸುವಂತೆ ಎಲ್ಲಾ ಡೈರೆಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್‌ರವರಿಗೆ ತಿಳಿಸಲಾಗಿರುತ್ತದೆ.

**ದೌರ್ಜನ್ಯಕ್ಕೊಳಗಾದ ಹಿರಿಯ ನಾಗರಿಕರು ತಮ್ಮ ಇಳಿ ವಯಸ್ಸಿನಲ್ಲಿ ನೆಮ್ಮದಿಯಿಂದ ಜೀವ ನಡೆಸಲು ಈ ಕೆಳಕಂಡ ಯೋಜನೆಗಳನ್ನು ಸರ್ಕಾರದಿಂದ ಅನುಷ್ಠಾನಗೊಳಿಸಲಾಗಿದೆ.**

1. **ಹಿರಿಯ ನಾಗರಿಕರ ಗುರುತಿನ ಚೀಟಿ**:60 ವರ್ಷ ಮೇಲ್ಪಟ್ಟ ವಯೋಮಾನದ ಹಿರಿಯ ನಾಗರಿಕರ ಗುರುತಿನ ಚೀಟಿ ಪಡೆಯಲು ಸೇವಾ ಸಿಂಧು ಆನ್‌ಲೈನ್ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿದ್ದು, ದಿ:01.10.2018ರಿಂದ ಹಿರಿಯ ನಾಗರಿಕರು **ಸೇವಾ ಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು** ಸಲ್ಲಿಸಿ, ಸಕಾಲ ಯೋಜನೆಯಲ್ಲಿ ಹಿರಿಯ ನಾಗರಿಕರ ಗುರುತಿನ ಚೀಟಿಯನ್ನು ಅಳವಡಿಸಿರುವುದರಿಂದ 21 ದಿನಗಳೊಳಗಾಗಿ ಗುರುತಿನ ಚೀಟಿ ಪಡೆಯಬಹುದಾಗಿದೆ.
2. **ವೃದ್ಧಾಪ್ಯ ವೇತನ : ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ** ಯೋಜನೆಯಡಿ 60 ರಿಂದ 64 ವರ್ಷದೊಳಗಿನ ಫಲಾನುಭವಿಗಳಿಗೆ ಮಾಹೆಯಾನ ರೂ.600/-ಗಳ ಪಿಂಚಣಿಯನ್ನು ನೀಡಲಾಗುತ್ತಿದೆ **ಸಂಧ್ಯಾ ಸುರಕ್ಷಾ ಯೋಜನೆಯಡಿ** ಸಾಮಾಜಿಕ ಭದ್ರತಾ ರೂಪದಲ್ಲಿ 65 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ರೂ.1,200/-ಗಳ ಆರ್ಥಿಕ ಸಹಾಯಧನವನ್ನು ಮಾಸಿಕವಾಗಿ ನೀಡಲಾಗುತ್ತಿದೆ.
3. **ಹಿರಿಯ ನಾಗರಿಕರ ಸಹಾಯವಾಣಿ (ಶುಲ್ಕ ರಹಿತ ದೂ.ಸಂ:1090)**:ಹಿರಿಯ ನಾಗರಿಕರು ಕಿರುಕುಳ, ಹಣಕಾಸಿನ ಶೋಷಣೆ, ಮಾನಸಿಕ ತುಮುಲ ಮತ್ತು ದುರ್ಬಲ ಇಂತಹ ಅನೇಕ ಸಮಸ್ಯೆಗಳ ನಿವಾರಣೆಗಾಗಿ ತುರ್ತು ಸಹಾಯಕ್ಕಾಗಿ **ಹಿರಿಯ ನಾಗರಿಕರ ಸಹಾಯವಾಣಿ (ಶುಲ್ಕ ರಹಿತ ದೂ.ಸಂ:1090)** ಕೇಂದ್ರಗಳನ್ನು ರಾಜ್ಯದ 30 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಲಾಗಿರುತ್ತದೆ. ಆದರೆ ಬೆಳಗಾವಿ, ಹಾವೇರಿ, ಉತ್ತರ ಕನ್ನಡ ಮತ್ತು ಕಲಬುರಗಿ ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ 26 ಜಿಲ್ಲೆಗಳಲ್ಲಿ ಸಹಾಯವಾಣಿ ಕೇಂದ್ರಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಆವರಣದಲ್ಲಿ, ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಿಂದ ನಡೆಸಲಾಗುತ್ತಿದೆ.

4. **<u>ಹಿರಿಯ ನಾಗರಿಕರ ರಾಷ್ಟ್ರೀಯ ಸಹಾಯವಾಣಿ (ಟೋಲ್ ಫ್ರೀ ಸಂಖ್ಯೆ14567):</u>** ಕೇಂದ್ರ ಸರ್ಕಾರವು ಉನ್ನತ ತಂತ್ರಜ್ಞಾನವನ್ನು ಬಳಕೆ ಮಾಡಿಕೊಂಡು ದೇಶದಲ್ಲಿ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಹೆಚ್ಚಿನ ಪರಿಣತೆ ಹೊಂದಿರುವ ಅತ್ಯುನ್ನತ ಸ್ವಯಂ ಸೇವಾ ಸಂಸ್ಥೆಗಳ ಸಲಹೆಗಾರರು / ಮಾರ್ಗದರ್ಶಿಗಳನ್ನು ಆಯ್ಕೆ ಮಾಡಿಕೊಂಡು, ತರಬೇತಿ ಹೊಂದಿರುವ ತಜ್ಞರನ್ನು ನೇಮಿಸಿಕೊಂಡು, ಲಭ್ಯ ಸಂಪನ್ಮೂಲ ಉಪಯೋಗಿಸಿಕೊಂಡು, ಸ್ವಯಂ ಸೇವಾ ಕಾರ್ಯಕರ್ತರನ್ನು ಒಗ್ಗೂಡಿಸಿಕೊಂಡು, ಸರ್ಕಾರ, ಸಾರ್ವಜನಿಕ ಮತ್ತು ಖಾಸಗಿ ಸಹಭಾಗಿತ್ವದಲ್ಲಿ ರಾಷ್ಟ್ರೀಯ ಮಟ್ಟದಲ್ಲಿ **"ರಾಷ್ಟ್ರೀಯ ಹಿರಿಯನಾಗರಿಕರ ಟೋಲ್ ಫ್ರೀ ಸಹಾಯವಾಣಿ"**ಯನ್ನು ಪ್ರಾರಂಭಿಸಿದೆ. ಕರ್ನಾಟಕ ಸರ್ಕಾರವು **ರಾಜ್ಯದಲ್ಲಿನ ಹಿರಿಯ ನಾಗರಿಕರಿಗೆ ಈ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದೊಂದಿಗೆ ಒಡಂಬಡಿಕೆ** ಮಾಡಿಕೊಂಡು ಬೆಂಗಳೂರಿನಲ್ಲಿರುವ ಹಿರಿಯ ನಾಗರಿಕರ ಸೇವಾ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ **ನೈಟಿಂಗೇಲ್ ಮೆಡಿಕಲ್ ಟ್ರಸ್ಟ್ ಸ್ವಯಂ ಸೇವಾ ಸಂಸ್ಥೆಯ** ಸಹಯೋಗದೊಂದಿಗೆ ರಾಜ್ಯ ಹಿರಿಯ ನಾಗರಿಕರ ಸಹಾಯವಾಣಿಯನ್ನು ಆರ್.ಟಿ.ನಗರದಲ್ಲಿ ಪ್ರಾರಂಭಿಸಲಾಗಿದೆ.
5. **<u>ರಾಜ್ಯ ಅನುದಾನಿತ ವೃದ್ಧಾಶ್ರಮಗಳು:</u>** ರಾಜ್ಯದಲ್ಲಿ 30 ಜಿಲ್ಲೆಗಳಲ್ಲಿ ಒಟ್ಟು 26 **ವೃದ್ಧಾಶ್ರಮ**ಗಳನ್ನು ನಡೆಸಲು ಸ್ವಯಂ ಸೇವಾ ಸಂಸ್ಥೆಗಳಿಗೆ ಅನುದಾನವನ್ನು ನೀಡಲು ಅವಕಾಶವನ್ನು ಕಲ್ಪಿಸಿಕೊಳ್ಳಲಾಗಿರುತ್ತದೆ. ಈ ಯೋಜನೆಯಡಿಯಲ್ಲಿ 25 ವೃದ್ಧರು ಇರುವ ಒಂದು ಘಟಕಕ್ಕೆ ಸಿಬ್ಬಂದಿ ವೆಚ್ಚ, ನಿರ್ವಹಣಾ ವೆಚ್ಚ, ಔಷಧಿ, ಕಟ್ಟಡ ಬಾಡಿಗೆ, ವೃತ್ತ ಪತ್ರಿಕೆ ಹಾಗೂ ಇತರೆ ವೆಚ್ಚಗಳಿಗಾಗಿ ಒಟ್ಟು ವಾರ್ಷಿಕ ರೂ.8.00ಲಕ್ಷಗಳ ಅನುದಾನವನ್ನು ಜಿಲ್ಲಾ ಪಂಚಾಯತ್, ಮೂಲಕ ನೀಡಲಾಗುತ್ತದೆ.
6. ಪ್ರತಿ ಜಿಲ್ಲೆಯ ಕಂದಾಯ ಉಪ ವಿಭಾಗದಲ್ಲಿ ತಲಾ ಒಂದರಂತೆ ಹೊಸದಾಗಿ 52 ವೃದ್ಧಾಶ್ರಮಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ತೆರೆಯಲು 2018-19ರಲ್ಲಿ ಆದೇಶವಾಗಿದ್ದು, ಪ್ರಸ್ತುತ 09 ವೃದ್ಧಾಶ್ರಮಗಳನ್ನು ಪ್ರಾರಂಭಿಸಲು ಅನುಮತಿ ದೊರೆತ್ತಿದ್ದು, ಕಾರ್ಯನಿರ್ವಹಿಸುತ್ತಿದೆ. 12 ಕಂದಾಯ ಉಪ ವಿಭಾಗದ ವೃದ್ಧಾಶ್ರಮಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.
7. **<u>ಕೇಂದ್ರ ಅನುದಾನಿತ ವೃದ್ಧಾಶ್ರಮ:</u>**ಕೇಂದ್ರ ಸರ್ಕಾರದ ಅನುದಾನದಡಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 49 ವೃದ್ಧಾಶ್ರಮಗಳು ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಈ ಯೋಜನೆಯಡಿಯಲ್ಲಿ 25 ವೃದ್ಧರು ಇರುವ ಒಂದು ಘಟಕಕ್ಕೆ ಸಿಬ್ಬಂದಿ ವೆಚ್ಚ, ನಿರ್ವಹಣಾ ವೆಚ್ಚ, ಔಷಧಿ, ಕಟ್ಟಡ ಬಾಡಿಗೆ, ವೃತ್ತ ಪತ್ರಿಕೆ ಹಾಗೂ ಇತರೆ ವೆಚ್ಚಗಳಿಗಾಗಿ ಒಟ್ಟು ವಾರ್ಷಿಕ ರೂ.24.00ಲಕ್ಷಗಳ ಅನುದಾನವನ್ನು ನೀಡಲಾಗುತ್ತಿದೆ.
8. **<u>ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರ:</u>**ರಾಜ್ಯದ 30 ಜಿಲ್ಲೆಗಳಿಗೆ ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರದ ಮಂಜೂರಾತಿ ದೊರೆತಿದ್ದು, 24 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಿದ್ದು, ಪ್ರತಿ ಕೇಂದ್ರದಲ್ಲಿ ಸುಮಾರು 50-150 ಫಲಾನುಭವಿಗಳಿಗೆ ಅವಕಾಶ ಕಲ್ಪಿಸಿಕೊಡಲಾಗಿದೆ.
9. **<u>ಜೆರಿಯಾಟ್ರಿಕ್ ಕೇಂದ್ರ:</u>** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ತುಮಕೂರು, ಕೋಲಾರ, ಬಾಗಲಕೋಟೆ, ಬೆಳಗಾಂ, ಧಾರವಾಡ, ಗುಲ್ಬರ್ಗಾ, ಉಡುಪಿ, ಬಿಜಾಪುರ, ಕೊಡಗು, ಚಿಕ್ಕಮಗಳೂರು ಮತ್ತು ಶಿವಮೊಗ್ಗ ಜಿಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಜೆರಿಯಾಟ್ರಿಕ್ ಕೇಂದ್ರಗಳನ್ನು

ನಡೆಸುತ್ತಿದ್ದು ಇಲ್ಲಿ 10 ಹಾಸಿಗೆಗಳನ್ನು ಕಾಯ್ದಿರಿಸುವ ಮೂಲಕ ಹಿರಿಯ ನಾಗರಿಕರಿಗೆ ಉಚಿತ ಆರೋಗ್ಯ ಸೇವೆ ಮತ್ತು ಚಿಕಿತ್ಸೆ ನೀಡಲಾಗುತ್ತದೆ.

10. **ಬಸ್ ಪಾಸ್:** ಬಿ.ಎಂ.ಟಿ.ಸಿ ಬಸ್‌ಗಳ ಪ್ರಯಾಣ ದರದಲ್ಲಿ ಶೇ.25ರಷ್ಟು ರಿಯಾಯಿತಿಯನ್ನು ನೀಡಲಾಗಿರುತ್ತದೆ. ಸಾಮಾನ್ಯ ಬಸ್‌ಗಳಲ್ಲಿ ಹಿರಿಯ ಮಹಿಳೆ ಹಾಗೂ ಪುರುಷರಿಗೆ ಪ್ರತ್ಯೇಕ 2 ಆಸನ ಮೀಸಲು, ಕೆ.ಎಸ್.ಆರ್.ಟಿ.ಸಿ. ಸಾಮಾನ್ಯ, ವೇಗದೂತ ಮತ್ತು ರಾಜಹಂಸ ಬಸ್ ದರಗಳಲ್ಲಿ ಶೇ.25ರಷ್ಟು ರಿಯಾಯಿತಿ. ಸಾಮಾನ್ಯ/ವೇಗದೂತ ಬಸ್‌ಗಳಲ್ಲಿ 02 ಆಸನಗಳು ಮೀಸಲು ಹಾಗೂ ಮಾಸಿಕ ಬಸ್‌ಪಾಸ್‌ಗಳಲ್ಲಿ ದರದಲ್ಲಿ ಶೇ.10ರಷ್ಟು ರಿಯಾಯಿತಿ ಸಹ ನೀಡಲಾಗಿರುತ್ತದೆ.

11. ಹಿರಿಯ ನಾಗರಿಕರು ಸರ್ಕಾರಿ ಕಛೇರಿಗಳಿಗೆ ತಮ್ಮ ಕೆಲಸದ ನಿಮಿತ್ತ ಭೇಟಿ ನೀಡಿದಾಗ ಅವರೊಂದಿಗೆ ಗೌರವದಿಂದ ವರ್ತಿಸಿ, ಆಸನದ ವ್ಯವಸ್ಥೆಯನ್ನು ಮಾಡುವಂತೆ ಹಾಗೂ ಅವರುಗಳ ಮನವಿ/ಕೋರಿಕೆಗಳನ್ನು ಆದ್ಯತೆಯ ಮೇಲೆ ಪರಿಗಣಿಸಿ, ಇಲಾಖೆಗಳು ಕೈಗೊಂಡಿರುವ ಕ್ರಮಗಳ ಮಾಹಿತಿಯನ್ನು ಹಿರಿಯ ನಾಗರಿಕರಿಗೆ ತಲುಪಿಸುವ ವ್ಯವಸ್ಥೆಯನ್ನು ಮಾಡುವಂತೆ ಸರ್ಕಾರದಿಂದ ಸುತ್ತೋಲೆ ಸಂಖ್ಯೆ:ಸಿಆಸಿಇ/38/ಕತವ/2021, ದಿನಾಂಕ:21.06.2021ರಂದು ಹೊರಡಿಸಲಾಗಿರುತ್ತದೆ.

ಸಂಖ್ಯೆ: ಮಮಇ 216 ಪಿಹೆಚ್‌ಪಿ 2022

Halappa BA

(ಆಚಾರ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ ಹಾಗೂ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ
ಇಲಾಖೆ ಸಚಿವರು